ಮುರಾರ್ಜಿ ದೇಸಾಯಿ ಪರಿಶಿಷ್ಟ ಜಾತಿ ಹಿಂದುಳಿದ ವರ್ಗಗಳ ವಸತಿ ನಿಲಯ ಮಂಜೂರಾತಿ

831 (1377) **ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ್)** : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆ, ಮುದ್ದೆಬಿಹಾಳ ತಾಲ್ಲೂಕಿನಲ್ಲಿ ಮೊರಾರ್ಜಿ ದೇಸಾಯಿ ಪರಿಶಿಷ್ಟ ಜಾತಿ ವಸತಿ ನಿಲಯಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಮುದ್ದೇಬಿಹಾಳ ತಾಲ್ಲೂಕಿಗೆ ಮೊರಾರ್ಜಿ ದೇಸಾಯಿ ಪರಿಶಿಷ್ಟ ಜಾತಿ ವಸತಿ ನಿಲಯವನ್ನು ಯಾವಾಗ ಮಂಜೂರು ಮಾಡಲಾಗುವುದು;

ಇ) ಬಿಜಾಪುರ ಜಿಲ್ಲೆ, ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಮೊರಾರ್ಜಿ ದೇಸಾಯಿ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಮುದ್ದೇಬಿಹಾಳ ತಾಲ್ಲೂಕಿಗೆ ಮೊರಾರ್ಜಿ ದೇಸಾಯಿ ಹಿಂದುಳಿದ ವರ್ಗಗಳ ವಸತಿ ನಿಲಯವನ್ನು ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ಮುದ್ದೇಬಿಹಾಳ್ ನಗರಕ್ಕೆ ಒಂದು ಪರಿಶಿಷ್ಟ ಜಾತಿ ವಸತಿ ಶಾಲೆ ತೆರೆಯಲು ಪ್ರಸ್ತಾವನೆ ಬಂದಿದೆ.

ಆ) ಪರಿಶೀಲಿಸಲಾಗುವುದು.

ಇ) ಹೌದು.

ಈ) ಪರಿಶೀಲಿಸಲಾಗುವುದು.